4.	ಕುಂದಗೋಳ	1
5.	ಹಾವೇರಿ	-
6.	ರಾಣೆಬೆನ್ನೂರು	-
7.	ಬ್ಯಾಡಗಿ	-
8.	ಹಿರೇಕೆರೂರು	-
9.	ಹಾನಗಲ್	-
10.	ಗದಗ	-
11.	ಮುಡರಗಿ	-
12.	ರೋಣ	-
13.	ನವಲಗುಂದ	-
14.	ಸವಣೂರು	-
15.	ಶಿಗ್ಗಾಂವ	-
16.	ಶಿರಹಟ್ಟಿ	-
17.	ನರಗುಂದ	-
	ಒಟ್ಟು	2

ಈ ಜಿಲ್ಲೆಯಲ್ಲಿ 2 ಸಹಕಾರ ಸಂಘಗಳ ಆಡಳಿತ ಮಂಡಳಿಯವರು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, 1959 ಮತ್ತು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ಹಾಗೂ ಸಂಘದ ಪೋಟ ನಿಯಮಗಳ ವಿರುದ್ಧವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಮತ್ತು ಸಾಲವನ್ನು ಸರಿಯಾಗಿ ವಸೂಲಿ ಮಾಡದೆ ಇರುವುದರಿಂದ ಸದರಿ ಎರಡು ಸಂಘಗಳ ಆಡಳಿತ ಮಂಡಳಿಯನ್ನು ಕರ್ನಾಟಕ ಸಹಕಾರ ಸಂಘಗಳ ಕಾಯಿದೆಯ ಕಲಂ 30 (1) ರನ್ವಯ ರದ್ದುಪಡಿಸಿ ಜಿಲ್ಲಾ ಉಪ ನಿಬಂಧಕರು ಆಡಳಿತಾಧಿಕಾರಿಗಳನ್ನು ನೇಮಿಸಿದ್ದಾರೆ.

ಅ) ಅಂತಹ ಸಹಕಾರ ಸಂಘಗಳು ಯಾವುದೂ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ :- ಗದಗ್ ತಾಲ್ಲೂಕು ಹೊಂಬಳ ಗ್ರಾಮಕ್ಕೆ ಬಸ್ ವಿಲ್ಲಾಣ.

ಬುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 884(1146)

ಶ್ರೀ ಡಿ. ಆರ್. ಪಾಟೀಲ್ (ಗದಗ್) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗದಗ್ ತಾಲ್ಲೂಕ್ ಹೊಂಬಳ ಗ್ರಾಮ ಪಂಚಾಯತ್ ತನ್ನ ಗ್ರಾಮದಲ್ಲಿ ಬಸ್ ನಿಲ್ದಾಣ ನಿರ್ಮಿಸಲು ನಿವೇಶನವನ್ನು 1992 ರಲ್ಲಿ ನೀಡಿದ್ದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ವರೆಗೆ ಬಸ್ ನಿಲ್ದಾಣ ಕಟ್ಟಿಸದಿರಲು ಕಾರಣಗಳೇನು.

ಇ) ಪ್ರಸಕ್ತ ಹಣಕಾಸು ವರ್ಷದಲ್ಲಿ ಬಸ್ ನಿಲ್ದಾಣ ನಿರ್ಮಿಸಲಾಗುವುದೇ?

ಶ್ರೀ ಪಿ. ಜಿ. ಆರ್. ಸಿಂಧ್ಯಾ (ಸಾರಿಗೆ ಸಚಿವರು) :-

ಅ) ಬಂದಿದೆ.

ಆ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಹಣಕಾಸಿನ ಮುಗ್ಗಟ್ಟಿನಿಂದ ಕೆಲಸವನ್ನು ಕೈಗೊಂಡಿರುವುದಿಲ್ಲ.

ಇ) ಸಧ್ಯಕ್ಕೆ ಪ್ರಸ್ತಾವನೆ ಇರುವುದಿಲ್ಲ.

ವಿಷಯ :- ಮಾರುಕಟ್ಟೆಯಲ್ಲಿ ರೈತರಿಗಾಗುತ್ತಿರುವ ಶೋಷಣೆ ತಡೆಯುವುದು.

ಚುಕ್ಕೆ ಗುರ್ತಿಲ್ಲದ ಪ್ರಶ್ನೆ ಸಂಖ್ಯೆ 858 (765)

ಶ್ರೀ ಡಿ. ಆರ್. ಪಾಟೀಲ್ (ಗದಗ್) :- ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸಹಕಾರ ಇಲಾಖೆಗೆ ಸಂಬಂಧಿಸಿದ ವಿಷಯ ಸಮಿತಿ ಮಾರುಕಟ್ಟೆಯಲ್ಲಿ ರೈತರಿಗಾಗುತ್ತಿರುವ ಶೋಷಣೆ ತಡೆಯಲು ಕಳೆದ ವರ್ಷ ವಿವಿಧ ರಾಜ್ಯಗಳಲ್ಲಿ ಅಧ್ಯಯನ ಪ್ರವಾಸ ಮಾಡಿ ಸರ್ಕಾರಕ್ಕೆ ಸಲಹೆ ಸೂಚನೆ ನೀಡಿ ವರದಿ ಸಲ್ಲಿಸಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ;

ಆ) ಸಲಹಾ ಸಮಿತಿಯವರು ಮಾಡಿರುವ ಶಿಫಾರಸ್ಸುಗಳನ್ನು ಜಾರಿಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

ಇ) ಮಾರುಕಟ್ಟೆಯಲ್ಲಿ ರೈತರ ಮಾಲು ಮಾರಾಟವಾದ ನಂತರ ಆತನಿಗೆ ಹಣ ಸಂದಾಯ ಮಾಡುವಲ್ಲಿ ಆಗುತ್ತಿರುವ ವಿಳಂಬ ಅಕ್ರಮ ದಲಾಲಿ ವಸೂಲಿ ತಡೆಯಲು ಈ ಹಿಂದಿನ ಇಲಾಖೆ ಸಚಿವರು ಹಾಗೂ ಮುಖ್ಯಮಂತ್ರಿಗಳು ವಿಷಯ ಸಮಿತಿಗೆ ನೀಡಿದ್ದ ಭರವಸೆಯನ್ನು ಈಡೇರಿಸಲಾಗುವುದೆ.

ಈ) ಇದಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು?